Received on 26/6/2020
Wup.

ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/28/ಕ.ವಿ.ಕೋ.ಮಾಹಿತಿ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಉನ್ನತ ಶಿಕ್ಷಣಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು,ದಿನಾಂಕ:26-06-2020

## ಸುತ್ತೋಲೆ

**ವಿಷಯ:** 2017-18ನೇ ಸಾಲಿನಿಂದ 2019-20ನೇ ಶೈಕ್ಷಣಿಕ ಸಾಲಿನವರೆಗೆ ವಿದ್ಯಾರ್ಥಿ ಪ್ರವೇಶಾತಿ ಸಂಖ್ಯೆ ಮಾಹಿತಿಯನ್ನು ಇ.ಎಂ.ಐ.ಎಸ್ ನಲ್ಲಿ ಅಪ್ ಲೋಡ್ ಮಾಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ:ಇಡಿ/49/ಹೆಚ್.ಪಿ.ಸಿ/2019, ದಿನಾಂಕ:11-5-2020.

*****

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ 2019-20ನೇ ಶೈಕ್ಷಣಿಕ ಸಾಲಿನವರೆಗೆ ಮೂರು ವರ್ಷಗಳಲ್ಲಿ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳ ಕೋರ್ಸ್/ಕಾಂಬಿನೇಷನ್‌ವಾರು ನಿಖರವಾದ ಮಾಹಿತಿಯನ್ನು ದಿನಾಂಕ:02-07-2020 ರೊಳಗೆ ಇಲಾಖೆಯ ಇ.ಎಂ.ಐ.ಎಸ್ ನಲ್ಲಿ ಕಡ್ಡಾಯವಾಗಿ ಅಪ್ ಲೋಡ್ ಮಾಡುವಂತೆ ಸೂಚಿಸಲಾಗಿದೆ. ಹಾಗೂ ಅಪ್‌ಲೋಡ್ ಮಾಡಿರುವ ಮಾಹಿತಿಯಲ್ಲಿ ಯಾವುದೇ ಲೋಪದೋಷವಿದ್ದಲ್ಲಿ, ಸಂಬಂಧಿಸಿದ ಪ್ರಾಂಶುಪಾಲರುಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

ಎಲ್ಲಾ ಪ್ರಾದೇಶಿಕ ಜಂಟಿ ನಿದೇಶಕರು ತಮ್ಮ ಕಛೇರಿಯ ವ್ಯಾಪ್ತಿಗೊಳಪಡುವ ಕಾಲೇಜುಗಳು ಮೇಲ್ಕಂಡ ಮಾಹಿತಿಯನ್ನು ಅಪ್‌ಲೋಡ್ ಮಾಡಿರುವ ಬಗ್ಗೆ ಪರಿಶೀಲಿಸಲು, ಇಬ್ಬರು ವಿಶೇಷ ಅಧಿಕಾರಿಗಳಿಗೆ ವಹಿಸುವುದು. ಸದರಿ ವಿಶೇಷಾಧಿಕಾರಿಗಳು ತಮ್ಮ ಕಛೇರಿ ವ್ಯಾಪ್ತಿಯ ಎಲ್ಲಾ ಕಾಲೇಜುಗಳು ಮಾಹಿತಿಯನ್ನು ಅಪ್‌ಲೋಡ್ ಮಾಡುವ ಬಗ್ಗೆ ಅಗತ್ಯ ಕ್ರಮವಹಿಸಿ ಕಾಲೇಜುಗಳು ಸರಿಯಾದ ಮಾಹಿತಿಯನ್ನು ಅಪ್‌ಲೋಡ್ ಮಾಡಲು ಸೂಕ್ತ ಕ್ರಮವಹಿಸುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರು-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ - ಇವರಿಗೆ ಅಗತ್ಯ ಕ್ರಮವಹಿಸಲು.

ಪ್ರತಿಯನ್ನು:

1. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು- ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
2. ಕಛೇರಿ ಪ್ರತಿ.